ಬರುವುದಿಲ್ಲ. ಆದ್ದರಿಂದ ಪ್ರಶ್ನೆಯನ್ನು ನಗರಸಭೆ ಪಾಲಿಕೆಗೆ ವರ್ಗಾಯಿಸಿರುವುದರಿಂದ ಅಲ್ಲಿಂದ ನಿಮಗೆ ಉತ್ತರ ಬರುತ್ತದೆ ಎನ್ನುವ ಮಾತು ಅಷ್ಟೇ ಇನ್ನೇನಿಲ್ಲ.

ಶ್ರೀ ನೆ.ಲ.ನರೇಂದ್ರಬಾಬು: ಆರೋಗ್ಯ ಇಲಾಖೆಯ ವ್ಯಾಪ್ತಿಗೆ ಕೆ.ಸಿ.ಜಿ.ಆಸ್ಪತ್ರೆ ಬರುವುದಿಲ್ಲವೆ?

(ಗೊಂದಲ)

ಅಧ್ಯಕ್ಷರು: ನಗರಾಭಿವೃದ್ಧಿ ಇಲಾಖೆಯು ಸಚಿವರಿಂದ ಉತ್ತರ ಕೊಡಿಸುತ್ತೇನೆ ಬಿಡಿ.

(ಗೊಂದಲ)

ಶ್ರೀ ಎಸ್.ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಆರೋಗ್ಯ ಸಚಿವರು ಕೆ.ಸಿ.ಜಿ. ಆಸ್ಪತ್ರೆ ಆರೋಗ್ಯ ಇಲಾಖೆಗೆ ಬರುತ್ತದೆಂದು ಹೇಳಿದ್ದಾರೆ. ಹ್ಯಾರಿಸ್‌ರವರ ಪ್ರಶ್ನೆ ನಗರಾಭಿವೃದ್ಧಿ ಇಲಾಖೆಗೆ ವರ್ಗಾವಣೆ ಆಗಿದೆ. ಅಲ್ಲಂದಲೇ ಉತ್ತರ ಸಿಗುತ್ತದೆ.

ಶ್ರೀ ಶ್ರೀರಾಮುಲು (ಮಾನ್ಯ ಆರೋಗ್ಯ ಸಚಿವರು): ಕೆ.ಸಿ.ಜನರಲ್ ಆಸ್ಪತ್ರೆ ಆರೋಗ್ಯ ಇಲಾಖೆಗೆ ಬರುತ್ತದೆಂದು ಸ್ಪಷ್ಟವಾಗಿ ಹೇಳಿದ್ದೇನೆ.

ಅಧ್ಯಕ್ಷರು: ನಿಮ್ಮ ಪ್ರಶ್ನೆ ನಗರಾಭಿವೃದ್ಧಿ ಇಲಾಖೆಗೆ ಬರುತ್ತದೆ, ಅಲ್ಲಿಂದ ನಿಮಗೆ ಉತ್ತರ ಕೊಡಿಸುತ್ತೇನೆ ಧ್ರುವನಾರಾಯಣರವರೇ ನಿಮ್ಮದೇನು ಹೇಳಿ. ಶ್ರೀರಾಮುಲುರವರೇ ಒಂದು ಸಾರಿ ಚಾಮರಾಜನಗರ ಜಿಲ್ಲೆಗೆ ಹೋಗಿ ಬಂದುಬಿಡಿ, ಅಲ್ಲಿಗೆ ಯಾರೂ ಹೋಗುತ್ತಿಲ್ಲ, ನಾನು ಕಂದಾಯ ಸಚಿವನಾಗಿದ್ದಾಗ ಹೋಗಿ ಬಂದಿದ್ದೇನೆ. ನೀವು ಒಂದು ಸಾರಿ ಹೋಗಿ ಬಂದುಬಿಡಿ.

ಶ್ರೀ ಶ್ರೀರಾಮುಲು (ಆರೋಗ್ಯ ಸಚಿವರು): ಆಯಿತು.

ಅಧ್ಯಕ್ಷರು: ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು:

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನೆ, ಸಾಂಖ್ಯಿಕ ಸಚಿವರು): ದಿನಾಂಕ 26.02.2009 ರಂದು 4ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 49 ಪ್ರಶ್ನೆಗಳಿಗೆ ಪೈಕಿ 44 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಅನುಬಂಧ–1

ಅಧ್ಯಕ್ಷರು: ಈಗ ಸಿದ್ಧರಾಮಯ್ಯನವರು 2008–09ನೇ ಸಾಲಿನ ಸಾರ್ವಜನಿಕ ಲೆಕ್ಕ ಪತ್ರಗಳ ಸಮಿತಿಯ ವರದಿಯನ್ನು ಒಪ್ಪಿಸುವುದು.